ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 23-02-2017

# ಪತ್ರಿಕಾ ಆಮಂತ್ರಣ

## 1. Valedictory function of XIII Agricultural Science Congress: "Theme Climate Smart Agriculture".

**Chief Guest:**

**D.V. Sadananada Gowda,**
**Minister for Statistics and Programme Implementation, G.O.I.**

**Priyanka Kharge,**
**Minister for Information Technology & Bio-Technology and Tourism, G.O.K.**

**Preside by:**

**Dr. H. Shivanna,**
**Vice-Chancellor, UASB and Convenor, XIII Agricultural Science Congress.**

**Date: 24-02-2017, Friday Time : 2.00 PM.**

**Place: Dr. Babu Rajendra Prasad International Convention Implemention Centre, UAS, GKVK, Bengaluru.**

**Note: Vechicle arrangements has been made from Media Persons from Cubbon Park, near Press Club at 1.00 PM on that day.**

**Contact: Dr. K. Shivaramu, Mob. No. 9972035456.**

**ಪತ್ರಿಕಾ ಪ್ರಕಟಣೆ**

# ಮಾರ್ಚ್ 8 ರಂದು ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪ್ರದಾನ

**ಬೆಂಗಳೂರು, ಫೆಬ್ರವರಿ 23 , (ಕರ್ನಾಟಕ ವಾರ್ತೆ)**

ಮಕ್ಕಳ ಮಹಿಳಾ ದಿನಾಚರಣೆ ಅಂಗವಾಗಿ ಮಾರ್ಚ್ 8 ರಂದು ನಗರದ ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು ಇಲ್ಲಿ ಬೆಳಿಗ್ಗೆ 11.00 ಗಂಟೆಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಮ್ಮಿಕೊಂಡಿದೆ.

ಈ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಈ ಸಮಾರಂಭದ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಇತರೆ ಪ್ರಶಸ್ತಿ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜಿಪಿಆರ್.

# ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ

**ಬೆಂಗಳೂರು, ಫೆಬ್ರವರಿ 23 , (ಕರ್ನಾಟಕ ವಾರ್ತೆ)**

ಖಾಸಗಿ ಶಾಲಾ ಕಾಲೇಜು ಮತ್ತು ವಿವಿಧ ತರಬೇತಿ ಕೇಂದ್ರಗಳಲ್ಲಿ ಕೆಲಸ ಮಾಡುವ ಬೋಧಕೇತರ ಸಿಬ್ಬಂದಿ " ಉದ್ದಿಮೆ" ಯನ್ನು ಕನಿಷ್ಠ ವೇತನ ಕಾಯ್ದೆಯ ಅನುಬಂಧ ಭಾಗ-1ಕ್ಕೆ ಸೇರಿಸಿ ಕಾರ್ಮಿಕ ಇಲಾಖೆ ಅಧಿಸೂಚನೆ ಹೊರಡಿಸಿದೆ.

1948 ರ ಕನಿಷ್ಠ ವೇತನ ಕಾಯ್ದೆ ಪ್ರಕಾರ "ಖಾಸಗಿ ಶಾಲಾ ಕಾಲೇಜು ಮತ್ತು ವಿವಿಧ ತರಬೇತಿ ಕೇಂದ್ರಗಳಲ್ಲಿ ಕೆಲಸ ಮಾಡುವ ಭೋದಕೇತರ ಸಿಬ್ಬಂದಿ" ಈ ಉದ್ದಿಮೆಯಲ್ಲಿ ತೊಡಗಿರುವ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿಪಡಿಸಬೇಕೆಂದು ಕರ್ನಾಟಕ ಸರ್ಕಾರವು ಭಾವಿಸಿರುವುದರಿಂದ, ಸದರಿ ಉದ್ದಿಮೆಯನ್ನು ಕನಿಷ್ಠ ವೇತನ ಕಾಯ್ದೆಯ ಅನುಬಂಧದ ಭಾಗ-1ಕ್ಕೆ ಸೇರ್ಪಡೆ ಮಾಡುವ ಬಗ್ಗೆ ಸರ್ಕಾರವು ಕರಡು ಪ್ರಸ್ತಾವನೆಯನ್ನು ದಿನಾಂಕ: 17-08-2016 ರಂದು ಪ್ರಕಟಿಸಿ, ಇದರಿಂದ ಬಾದಿತರಾಗುವ ಹಾಗೂ ಸಂಬಂಧವಿರುವ ವ್ಯಕ್ತಿಗಳಿಂದ

ಸಲಹೆ/ಆಕ್ಷೇಪಣೆಗಳನ್ನು ಸ್ವೀಕರಿಸಲು ಮೂರು ತಿಂಗಳ ಕಾಲಾವಧಿಯನ್ನು ನೀಡಲಾಗಿತ್ತು. ಸದರಿ ಅವಧಿಯಲ್ಲಿ ಈ ಬಗ್ಗೆ ಯಾವುದೇ ಸಲಹೆ/ಆಕ್ಷೇಪಣೆಗಳು ಸ್ವೀಕೃತಗೊಂಡಿರಲಿಲ್ಲ

ಈ ಹಿನ್ನೆಲೆಯಲ್ಲಿ ಕನಿಷ್ಠ ವೇತನ ಕಾಯ್ದೆ 1948 ರ ಕೇಂದ್ರಾಧಿನಿಯಮ XI ರ ಸೆಕ್ಷನ್ 27 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಅಧಿಸೂಚನೆ ಹೊರಡಿಸಲಾಗಿದೆ ಎಂದು ಕಾರ್ಮಿಕ ಇಲಾಖೆಯ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜಿಪಿಆರ್.

# ಸುಗಮ ಸಂಚಾರ ವ್ಯವಸ್ಥೆಗಾಗಿ ಸಾರಿಗೆ ಸಂಸ್ಥೆಗಳಿಗೆ ಜೂನ್ ಒಳಗಾಗಿ 5500 ಹೊಸ ಬಸ್ ಖರೀದಿ

– ಸಚಿವ ರಾಮಲಿಂಗಾರೆಡ್ಡಿ

ಬೆಂಗಳೂರು, ಫೆಬ್ರವರಿ 23 , (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯನ್ನು ಸದೃಢಗೊಳಿಸಲು ಹಾಗೂ ಸಾರ್ವಜನಿಕರಿಗೆ ಸಗಟು ಸಂಚಾರ ವ್ಯವಸ್ಥೆ ಕಲ್ಪಿಸಲು ಜೂನ್ ಅಂತ್ಯದ ಒಳಗಾಗಿ ಸಾರಿಗೆ ಸಂಸ್ಥೆಗೆ 5500 ಹೊಸ ಬಸ್‌ಗಳನ್ನು ಖರೀದಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಮಾರ್ಚ್ ತಿಂಗಳ ಅಂತ್ಯಕ್ಕೆ 1650 ಹೊಸ ಬಸ್‌ಗಳು ಸಂಸ್ಥೆಗೆ ಬರಲಿದ್ದು ಎಲ್ಲಾ 1650 ಬಸ್ಸುಗಳನ್ನು ಬೆಂಗಳೂರು ಸಂಚಾರಕ್ಕೆ ಬಳಸಲಾಗುವುದು. ನಂತರ ಖರೀದಿಸುವ ಬಸ್ಸುಗಳನ್ನು ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಧಾರವಾಡ ಹಾಗೂ ಬೆಳಗಾವಿ ವಿಭಾಗಗಳಿಗೆ ಮೀಸಲಿರಿಸುವುದಾಗಿ ಸಚಿವ ರಾಮಲಿಂಗಾರೆಡ್ಡಿ ಅವರು ಪ್ರಕಟಿಸಿದರು. ಹೊಸ ಬಸ್ಸುಗಳು ಬಂದ ಮೇಲೆ ಹಳೆಯ ಬಸ್‌ಗಳನ್ನು ನಿಲ್ಲಿಸಿ ಆ ಮಾರ್ಗಗಳಲ್ಲಿ ಹೊಸ ಬಸ್‌ಗಳ ಸಂಚಾರಕ್ಕೆ ಅವಕಾಶ ಕಲ್ಪಿಸುವುದಾಗಿ ಸಚಿವರು ತಿಳಿಸಿದರು.

ಇತ್ತೀಚೆಗೆ ನೆಲಮಂಗಲದ ಹತ್ತಿರ ನಡೆದ ಬಸ್ ದುರಂತಕ್ಕೆ ಸಂಬಂಧಿಸಿದಂತೆ ಬಸ್‌ನಲ್ಲಿ ಯಾವುದೇ ತಾಂತ್ರಿಕ ದೋಷವಿರಲಿಲ್ಲ. ದುರಂತ ನಡೆದ ಸಂದರ್ಭದಲ್ಲಿ ಬಸ್ಸಿನ ಇಂಜೀನ್,

ಡಿಸೇಲ್ ಟ್ಯಾಂಕರ್, ಬಸ್ಸಿನ ಟೈರ್‌ಗಳು ಸುಸ್ಥಿತಿಯಲ್ಲಿದ್ದವು. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಕೆಲವು ಪ್ರಯಾಣಿಕರೇ ಹೇಳುವಂತೆ ಪೂಜಾ ಸಾಮಗ್ರಿಗಳುಳ್ಳ ಒಂದು ಚೀಲ ಇತ್ತು. ಆ ಕಾರಣದಿಂದ ಬಸ್ಸಿನಲ್ಲಿ ಬೆಂಕಿ ಕಾಣಿಸಿಕೊಂಡಿತ್ತು ಎನ್ನುತ್ತಿದ್ದಾರೆ. ಆದರೂ ಸತ್ಯಾಸತ್ಯತೆ ಅರಿಯಲು ಬೆಂಕಿ ದುರಂತದ ಬಗ್ಗೆ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಸಂಬಂಧ ಕೆಲವು ಮಾದರಿಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಒಂದು ವಾರದಲ್ಲಿ ವರದಿ ಬರುತ್ತದೆ ಎಂದು ಸಚಿವ ರಾಮಲಿಂಗಾರೆಡ್ಡಿ ಅವರು ಪತ್ರಕರ್ತರೊಂದಿಗೆ ಮಾತನಾಡುತ್ತಾ ತಿಳಿಸಿದರು.

## ಅಗ್ನಿಶಾಮಕ ಸಾಧನ ಅಳವಡಿಕೆ:

ಸರ್ಕಾರಿ, ಖಾಸಗಿ, ಶಾಲಾ ಕಾಲೇಜು ವಾಹನ ಹಾಗೂ ಲಾರಿಗಳಲ್ಲಿ ಅಗ್ನಿ ದುರಂತ ತಡೆಯುವ ಸಂಬಂಧ ಅಗ್ನಿಶಾಮಕ ಸಾಧನವನ್ನು ಕಡ್ಡಾಯವಾಗ ಅಳವಡಿಸುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದು ಸಾರಿಗೆ ಸಚಿವರು ತಿಳಿಸಿದರು.

## ಉಚಿತ ಬೃಹತ್ ಉದ್ಯೋಗ ಮೇಳ:

ಕೋರಮಂಗಲದ ಕಾಂಪ್ಲೆಕ್ಸ್ ಹತ್ತಿರವಿರುವ ರೆಡ್ಡಿ ಜನಸಂಘ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಇದೇ ಭಾನುವಾರ ಬೃಹತ್ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಈ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ 116 ಕಂಪನಿಗಳು ಪಾಲ್ಗೊಳ್ಳಲಿವೆ. ಅಂದು ನಡೆಯುವ ಉದ್ಯೋಗ ಮೇಳದಲ್ಲಿ ಸುಮಾರು 5 ಸಾವಿರಕ್ಕೂ ಹೆಚ್ಚು ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವ ನಿರೀಕ್ಷೆ ಹೊಂದಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿರುವವರಿಂದ ಹಿಡಿದು ಪದವಿ ಪಡೆದ ಸ್ಥಳೀಯ ಪದವೀಧರರು ಹಾಗೂ ಇತರೆ ಪ್ರದೇಶಗಳ ಉದ್ಯೋಗ ಅಕಾಂಕ್ಷಿಗಳು ಈ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಉದ್ಯೋಗ ಮೇಳದ ಲಾಭ ಪಡೆದುಕೊಳ್ಳಬೇಕು ಎಂದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ಅವರು ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಎಸ್‌ಎಂ:ಜಿಪಿಆರ್.

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಫೆಬ್ರವರಿ 23, (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:26-02-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀಮತಿ. ವಾಣಿಶ್ರೀ ಮತ್ತು ತಂಡ, ಕಲಬುರ್ಗಿ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀಮತಿ.ಅರುಣಕುಮಾರಿ.ಡಿ.ಎಂ. ಮತ್ತು ತಂಡ, ಚಿಕ್ಕಬಳ್ಳಾಪುರ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗದಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ** ಸಹಯೋಗದೊಂದಿಗೆ **ಶ್ರೀಮತಿ.ಅನನ್ಯ ಗಣೇಶ್ ರವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ** ಸೊಸೈಟಿ, ಬೆಂಗಳೂರು ರವರ ಸಹಯೋಗದೊಂದಿಗೆ **ನಾಟ್ಯಜ್ಯೋತಿ ಕಲಾ ಮಂದಿರ ಸಂಸ್ಥೆ, ಬೆಂಗಳೂರು ರವರಿಂದ ಸಮೂಹ ನೃತ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಬಸವೇಶ್ವರ ನಗರ, ಬೆಂಗಳೂರು** ರವರ **ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 8.00 ರಿಂದ ಬೆಳಿಗ್ಗೆ 09.30 ಘಂಟೆಯವರೆಗೆ ಟೋಟಲ್ ಯೋಗ, ಬೆಂಗಳೂರು ರವರ ವತಿಯಿಂದ ಕರ್ಮ ಯೋಗಥಾನ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.30 ಘಂಟೆಯವರೆಗೆ ಗ್ರೀನ್ ಪೀಸ್, ಎನ್ವಿರಾನ್‌ಮೆಂಟಲ್ ಟ್ರಸ್ಟ್ , ಬೆಂಗಳೂರು ರವರ ವತಿಯಿಂದ ಸಾರ್ವಜನಿಕರಲ್ಲಿ ಪರಿಸರದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

# ಫಲಿತಾಂಶ

**ಬೆಂಗಳೂರು, ಫೆಬ್ರವರಿ 23, (ಕರ್ನಾಟಕ ವಾರ್ತೆ)**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ಇತರೆ ಪರೀಕ್ಷೆಗಳು) ವತಿಯಿಂದ ಜನವರಿ –2017 ರಲ್ಲಿ ನಡೆದ ಚಿತ್ರಕಲಾ ಲೋಯರ್ ಮತ್ತು ಹೈಯರ್ ಗ್ರೇಡ್ ಪರೀಕ್ಷೆಯ ಫಲಿತಾಂಶವನ್ನು ಆಯಾ ಪರೀಕ್ಷಾ ಕೇಂದ್ರಗಳಲ್ಲಿ ಫೆಬ್ರವರಿ 28 ರಂದು ಬೆಳಿಗ್ಗೆ 10.00 ಗಂಟೆಗೆ ಪ್ರಕಟಿಸಲಾಗುವುದೆಂದು ನಿರ್ದೇಶಕರು(ಇತರೆ ಪರೀಕ್ಷೆಗಳು) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ಎಸ್‌ಎಂ/ಕೆಎಂ**

# ಅಧಿಕಾರ ಸ್ವೀಕಾರ

**ಬೆಂಗಳೂರು, ಫೆಬ್ರವರಿ 23, (ಕರ್ನಾಟಕ ವಾರ್ತೆ)**

**ಶ್ರೀ.ಎಸ್.ಆರ್.ಉಮಾಶಂಕರ್, ಭಾ.ಆ.ಸೇ, ರವರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ದಿನಾಂಕ: 23–02–2017 ರಂದು ಅಧಿಕಾರ ವಹಿಸಿಕೊಂಡಿರುತ್ತಾರೆ.**

**ಎಸ್‌ಎಂ/ಕೆಎಂ**

# Ramanagar Marathon on Feb 26 for awareness about Water conservation

## Bangalore, Feb 23(Karnataka Information)

**Ramanagar District Administration in association with Yellow and Red Foundation of Ramanagara has organised the Ramanagara Marathon 2017 on 26 February 2017 as part of "Jalaandolana", a campaign to drive large awareness about water conservation and efficient water management.**

**Individuals and organisations from all walks of life such as Bosch India Foundation, Bidadi Industries Association, Transystem, Elliott Ebara, GAIL, Rotary Club, Impana Hospital, BGS group and many more have joined hands to take part in this marathon.**

**Deputy Commissioner, Ramanagara Dr. B.R. Mamatha has appealed the citizens of the district to join hands in this mission to disseminate the message of water conservation adn efficient water management of water to each and everyone in the district.**

**Ramanagara District had very less rainfall in the year 2016-17. This has pushed the district into the grips of very severe crises of water shortage. Recognising the gravity of the situation the district administration of Ramanagara has taken up Jalaandolana-an initiative to mobilise and involve the communities of people of the district to tide over this crisis.**

**As part of this mission Madhyama Jalaandolana, Krishi Jalaandolana, Mahila jalaandolana, workshops to create awareness have been conducted in which eminent resource persons such as Jalashree Aiyappa Masagi, Water resources**

**expert Radhakrishna Bhadti and progressive farmer Lakshmegowda have anchored sessions unveiling the various dimensions of water shortage crises, harvesting and harnessing cum efficient utilisation of rain water, efficient utilisation of fresh water and re-utilisation of used water etc., says the press release.**

**sm/km**